**ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರ.ದ.ನ್ಯಾಯಿಕ ದಂಡಾಧಿಕಾರಿಗಳರವರ ನ್ಯಾಯಾಲಯ, ಹೆಚ್.ಡಿ.ಕೋಟೆ**

**ಸಿ.ಸಿ. ನಂ. 5288/2022**

**ಸಾಕ್ಷಿಗೆ ದಿನಾಂಕ 9.12.2024 ರಂದು ಪ್ರಮಾಣವಚನ ಬೋಧಿಸಲಾಯಿತು.**

| | | | |
|---|---|---|---|
| ಸಾಕ್ಷಿದಾರರ ಹೆಸರು | : | ಮಹದೇವ | ಪಿ.ಡಬ್ಲ್ಯೂ-3 |
| ತಂದೆಯ/ಗಂಡನ ಹೆಸರು | : | ಕರಿನಾಯಕ | ಸಿ.ಡಬ್ಲ್ಯೂ-3 |
| ವಯಸ್ಸು | : | 44 | |
| ಉದ್ಯೋಗ | : | ವ್ಯವಸಾಯ | |
| ವಾಸಸ್ಥಳ | : | ಆಲನಹಳ್ಳಿ | |

**ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ**

ಈಗ ನೋಡುತ್ತಿರುವ ನಿಪಿ1 ರಲ್ಲಿರುವ ಸಹಿ ನನ್ನದೇ ಆಗಿರುತ್ತದೆ. ಈಗ ಸುಮಾರು 2 ವರ್ಷದ ಹಿಂದೆ ಗಲಾಟೆಯ ವಿಚಾರವಾಗಿ ಹೆಚ್.ಡಿ.ಕೋಟೆ ಪೋಲಿಸರು ಆಲನಹಳ್ಳಿಯ ಚಾಸ 1 ರವರ ಮನೆಯ ಹತ್ತಿರ ಸ್ಥಳ ತನಿಖೆಗೆ ಬಂದಿದ್ದು ಚಾಸ 1 ರವರು ತೋರಿಸಿದ ಘಟನಾ ಸ್ಥಳವನ್ನು ನನ್ನ ಹಾಗೂ ಚಾಸ 2 ರವರ ಸಮಕ್ಷಮ ಪರಶೀಲಿಸಿ ಮಧ್ಯಾಹ್ನದ ಸಮಯದಲ್ಲಿ ಮಹಜರನ್ನು ಮಾಡಿರುತ್ತಾರೆ. ಸದರಿ ದಿನ ಪೋಲಿಸರು ಯಾವ ವಸ್ತುವನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದು ನನಗೆ ಗೊತ್ತಿರುವುದಿಲ್ಲ. ಸಾಕ್ಷಿದಾರರು ನಿಪಿ1 ರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ1 ಸಿ ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಎಪಿಪಿಯವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಲು ಅನುಮತಿ ಕೋರಿದ್ದರಿಂದ ಅನುಮತಿಯನ್ನು ನೀಡಲಾಯಿತು.)

**ಪಾಟೀಸವಾಲುಃ ಎಪಿಪಿ ರವರಿಂದಃ**

ಸದರಿ ದಿನ ಪೋಲಿಸರು ನ್ಯಾಯಾಲಯದ ಮುಂದಿರುವ ಎಂಓ 1 ರಿಂದ ಎಂಓ 3 ಮುದ್ದೆಮಾಲನ್ನು ಸ್ಥಳದಲ್ಲಿ ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ನನಗೆ ಗೊತ್ತಿರುವುದಿಲ್ಲ. ಸದರಿ ಮುದ್ದೆಮಾಲುಗಳನ್ನು ನನ್ನ ಸಮಕ್ಷಮ ಅಮಾನತ್ತುಪಡಿಸಿಕೊಂಡಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀಸವಾಲುಃ ಆರೋಪಿತರ  ಪರ ವಕೀಲರು ಸಮಯ ಕೋರಿದ್ದು 200/- ರೂ. ಖರ್ಚಿನೊಂದಿಗೆ ಸಮಯ ನೀಡಲಾಯಿತು.

ಮರು ವಿಚಾರಣೆಃ ಇಲ್ಲ

(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸಾ ಸ ಇ ಒ.,

ಹಿರಿಯ ಸಿ.ಜೆ ಮತ್ತು ಜೆ.ಎಂ.ಎಫ್.ಸಿ.,
ಹೆಚ್.ಡಿ.ಕೋಟೆ